ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1938(2300)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ಕುರಿತು

(ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಸರ್ಕಾರದ ಯಾವ ಯಾವ ಕಾರ್ಯಕ್ರಮ/ಯೋಜನೆಗಳು ಗ್ರಾಮ ಪಂಚಾಯಿತಿಗಳ ಮೂಲಕ ಜಾರಿಗೆ ಬರುತ್ತಿವೆ; ಈ ಕಾರ್ಯಕ್ರಮ/ಯೋಜನೆಗಳಿಗಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ಫಲಾನುಭವಿ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಈ ಗ್ರಾಮ ಪಂಚಾಯಿತಿಗಳು ಕರಗಳ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯವೆಷ್ಟು; ಈ ಆದಾಯವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಯಾವ ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ; ಹಾಗೂ ಯಾವ ಗ್ರಾಮ ಪಂಚಾಯಿತಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಇದಕ್ಕೆ ಪಾವತಿಸುತ್ತಿರುವ ಬಾಡಿಗೆ ಮೊತ್ತವೆಷ್ಟು? (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)